ಇ) ಈ ಕಾರ್ಖಾನೆಯನ್ನು ಶೀಘ್ರದಲ್ಲಿಯೇ ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಶಿವರಾಜ್ ಎಸ್ ತಂಗಡಗಿ(ಕೃಷಿ ಮಾರುಕಟ್ಟೆ ಮತ್ತು ಸಕ್ಕರೆ ಸಚಿವರು):

ಅ) ಭೀಮಾ ಶಂಕರ ಸಹಕಾರಿ ಸಕ್ಕರೆ ಕಾರ್ಖಾನೆಯು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರಡಿಯಲ್ಲಿ ಸಂಖ್ಯೆ ಡಿಎಸ್‌ಕೆ/10–1982–83 ದಿನಾಂಕ 20.4.1983ರಂದು ನೊಂದಣಿ ಆಗಿರುತ್ತದೆ.

ಆ) ಸಂಪನ್ಮೂಲದ ಕೊರತೆಯಿಂದಾಗಿ ಕಾರ್ಖಾನೆಯು ನಿರ್ಮಾಣದ ಹಂತದಲ್ಲಿಯೇ ಸ್ಥಗಿತಗೊಂಡ ಕಾರಣ ಈ ಕಾರ್ಖಾನೆಯನ್ನು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 72ರನ್ವಯ ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರ ಆದೇಶ ಸಂಖ್ಯೆ: ಡಿಎಸ್‌ಕೆ/ಇಎಸ್‌ಟಿಎಸ್/ಎಲ್‌ಕ್ಯೂಡಿ/53/2006–07 ದಿನಾಂಕ: 28.2.2007ರನ್ವಯ ಸಮಾಪನೆಗೊಳಿಸಿ ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಳಗಾವಿ ಪ್ರಾಂತ್ಯ, ಬೆಳಗಾವಿ ಇವರನ್ನು ಸಮಾಪನಾಧಿಕಾರಿಯನ್ನಾಗಿ ನೇಮಕ ಮಾಡಲಾಗಿರುತ್ತದೆ.

ಇ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ

178(320) ಡಾ.ಬಗಲಿ ಸಾರ್ವಭೌಮ ಸಾತಗೌಡ:(ಇಂಡಿ) ಮಾನ್ಯ ತೋಟಗಾರಿಕೆ ಮತ್ತು ಬಂದಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳು ಯಾವುವು;

ಆ) ಈ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಇನ್ನೂ ಬಿಡುಗಡೆ ಆಗಬೇಕಾದ ಅನುದಾನವೆಷ್ಟು;

ಇ) ಈ ಅನುದಾನದಲ್ಲಿ ಕೇಂದ್ರ ಸರ್ಕಾರದ ಸಾಲ ಎಷ್ಟು, ರಾಜ್ಯ ಸರ್ಕಾರದ ಸಾಲ ಎಷ್ಟು; (ವಿವರ ನೀಡುವುದು)?

ಶ್ರೀ ಉಮೇಶ್ ವಿ ಕತ್ತಿ(ತೋಟಗಾರಿಕೆ ಮತ್ತು ಬಂದಿಖಾನೆ ಸಚಿವರು):

ಅ) ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1. ಹೊಸ ತೋಟಗಳ ಪ್ರದೇಶ ವಿಸ್ತರಣೆ (ಹಣ್ಣುಗಳು, ಪುಷ್ಪಾಭಿವೃದ್ಧಿ ಬೆಳೆ),
2. ನಿರ್ವಹಣೆ – ಹಣ್ಣುಗಳು(1 ಮತ್ತು 2ನೇ ವರ್ಷದ ನಿರ್ವಹಣೆ)
3. ಪುನಶ್ಚೇತನ ಕಾರ್ಯಕ್ರಮ
4. ಸಮುದಾಯ ಕೆರೆ
5. ಸಂರಕ್ಷಿತ ಬೇಸಾಯ (ನೆರಳು ಪರದೆ ಮತ್ತು ಪಕ್ಷಿ ನಿರೋದಕ ಬಲೆ)
6. ಸಮಗ್ರ ಕೀಟ ನಿರ್ವಹಣೆ ಮತ್ತು ಸಮಗ್ರ ರೋಗ ನಿರ್ವಹಣೆ
7. ಸಾವಯವ ಕೃಷಿ (ಎರೆಹುಳು ಘಟಕ ಮತ್ತು ಜೀವಸಾರ ಘಟಕ)
8. ಮಾನವ ಸಂಪನ್ಮೂಲ ಅಭಿವೃದ್ಧಿ
9. ಪ್ಯಾಕ್ ಹೌಸ್
10. ಪ್ರಾಥಮಿಕ ಸಂಸ್ಕರಣಾ ಘಟಕ
11. ದಾಳಿಂಬೆ ಪುನಃಶ್ಚೇತನ ಕಾರ್ಯಕ್ರಮ

ಆ) ಈ ಕಾರ್ಯಕ್ರಮಗಳಿಗೆ ಯೋಜನೆ ಆರಂಭದಿಂದ ಅಂದರೆ, 2005–06ರಿಂದ 2009–10ರವರೆಗೆ ರೂ.413.675 ಲಕ್ಷ ಅನುದಾನ ಬಿಡುಗಡೆಯಾಗಿದೆ; ಪೂರ್ಣ ಅನುದಾನ ಬಿಡುಗಡೆಯಾಗಿದ್ದು, ಬಿಡುಗಡೆ ಆಗಬೇಕಾದ ಅನುದಾನ ಬಾಕಿಯಿರುವುದಿಲ್ಲ.

ಇ) ಈ ಕಾರ್ಯಕ್ರಮದಡಿ ಫಲಾನುಭವಿಗಳಿಗೆ ಅನುದಾನವು ಸಹಾಯಧನ ರೂಪದಲ್ಲಿ ನೀಡುತ್ತಿದ್ದ ಕೇಂದ್ರ ಹಾಗೂ ರಾಜ್ಯ ಸರ್ಕಾರ ಸಾಲ ಇರುವುದಿಲ್ಲ.

ಮೇಲ್ದರ್ಜೆಗೇರಿಸಲ್ಪಟ್ಟ ರಸ್ತೆಗಳು

179(323) ಡಾ: ಬಗಲಿ ಸಾರ್ವಭೌಮ ಸಾತಗೌಡ:(ಇಂಡಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ಜಿಲ್ಲಾ ಪಂಚಾಯತ್‌ನಿಂದ ಮೇಲ್ದರ್ಜೆಗೇರಿಸಲ್ಪಟ್ಟ ಲೋಕೋಪಯೋಗಿ ಇಲಾಖೆಯ ರಸ್ತೆಗಳು ಯಾವುವು

ಆ) ಈ ರಸ್ತೆಗಳ ಸುಧಾರಣೆಗಾಗಿ ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನವೆಷ್ಟು?

ಶ್ರೀ ಸಿ ಎಂ ಉದಾಸಿ(ಲೋಕೋಪಯೋಗಿ ಸಚಿವರು):